# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 370 (465) |
| ಸದಸ್ಯರ ಹೆಸರು | : | ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.02.2024 |
| ಉತ್ತರಿಸುವ ಸಚಿವರು | : | ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು |

| ಪ್ರಶ್ನೆ | | ಉತ್ತರ |
|---|---|---|
| (ಅ) | ದಿನಾಂಕ:18.11.2023ರಂದು ಪ್ರಥಮ ದರ್ಜೆ ಸಹಾಯಕ ವೃಂದದ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ಕರಡು ಜೇಷ್ಠತಾ ಪಟ್ಟಿಯಲ್ಲಿ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಎಷ್ಟು ಸರ್ಕಾರಿ ನೌಕರರಿಗೆ ಈಗಾಗಲೇ ನೀಡಲಾಗಿರುವ ತತ್ಪರಿಣಾಮ ಜೇಷ್ಠತೆಯ ಅರ್ಹತಾ ದಿನಾಂಕವನ್ನು ಬದಲಾವಣೆ ಮಾಡಲಾಗಿದೆ; | • ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ರವರ ಕಛೇರಿ, ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: KFD/HOFF/ B4(EST)/23/2023-PnR-KFD, E-1052703, ದಿನಾಂಕ:18.11.2023ರಲ್ಲಿ ಇಲಾಖೆಯ ಪ್ರಥಮ ದರ್ಜೆ ಸಹಾಯಕ ವೃಂದದ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ, ನಿಯಮಾನುಸಾರ ಸದರಿ ಕರಡು ಜೇಷ್ಠತಾ ಪಟ್ಟಿಯ ಕುರಿತು ಬಾಧಿತರಾದವರಿಂದ ನಿಗದಿತ ಅವಧಿಯೊಳಗೆ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿರುತ್ತದೆ.<br><br>• ಪ್ರಥಮ ದರ್ಜೆ ಸಹಾಯಕರ ಅರ್ಹತಾ ದಿನಾಂಕವನ್ನು ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು ಅರ್ಜಿ ಸಂಖ್ಯೆ: 3386-3406/2021 c/w 3062-3077/2021, ದಿನಾಂಕ: 30.09.2022ರಲ್ಲಿ ದಿನಾಂಕ: 27.04.1978 ರಿಂದ 31.12.2019ರ ರಾಜ್ಯ ಮಟ್ಟದ ಉಳಿಕೆ ಮೂಲ ವೃಂದದ ಪ್ರಥಮ ದರ್ಜೆ ಸಹಾಯಕರ ಅಂತಿಮ ಜೇಷ್ಠತಾ ಪಟ್ಟಿಯನ್ನು ರದ್ದುಪಡಿಸಿ, ನ್ಯಾಯಮಂಡಳಿಯ ಆದೇಶದಲ್ಲಿನ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, ಅದರನ್ವಯ ಪ್ರಥಮ ದರ್ಜೆ ಸಹಾಯಕರ ಕರಡು ಜೇಷ್ಠತಾ ಪಟ್ಟಿಯನ್ನು ಪುನಃ ರಚಿಸುವಾಗ ನೇರ ನೇಮಕಾತಿ ಕೋಟಾದಲ್ಲಿನ ಹುದ್ದೆಗಳ ಎದುರಾಗಿ ಹೆಚ್ಚುವರಿಯಾಗಿ ಮುಂಬಡ್ತಿಯಿಂದ ತುಂಬಲಾದ ಪ್ರಥಮ ದರ್ಜೆ ಸಹಾಯಕರ ಜೇಷ್ಠತಾ ವಿವರಗಳನ್ನು ಮತ್ತು ಅರ್ಹತಾ ದಿನಾಂಕವನ್ನು ಮುಂದಿನ ಬ್ಲಾಕ್ ಅವಧಿಯ ಬಡ್ತಿ ಕೋಟಾದಲ್ಲಿ ಲಭ್ಯವಾದ ಖಾಲಿ ಹುದ್ದೆಗಳಿಗೆ ಅನುಗುಣವಾಗಿ ಎಲ್ಲಾ ನೌಕರರುಗಳ ಅರ್ಹತಾದಾಯಕ ದಿನಾಂಕವನ್ನು ಪರಸ್ಪರ (***inter se***) ಜೇಷ್ಠತೆಯಂತೆ ನಿಗದಿಪಡಿಸಲಾಗಿರುತ್ತದೆ. |

| | | |
|---|---|---|
| | | • ಮೀಸಲಾತಿ ಆದೇಶದಲ್ಲಿ ಉಪಬಂಧಿಸಲಾದಂತ ಬಡ್ತಿಯಲ್ಲಿ ಮೀಸಲಾತಿ ಆದೇಶದ ನೀತಿಗೆ ಅನುಸಾರವಾಗಿ ದಿನಾಂಕ:27.04.1978 ರಿಂದ ಜಾರಿಗೆ ಬರುವಂತೆ ಬಡ್ತಿ ಹೊಂದಿದ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಸರ್ಕಾರಿ ನೌಕರರಿಗೆ ಈಗಾಗಲೇ ನೀಡಲಾಗಿರುವ ತತ್ಪರಿಣಾಮ ಜೇಷ್ಠತೆಯನ್ನು ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ 2017ರ ಕಲಂ 4 ರಂತೆ ಸಂರಕ್ಷಿಸಲಾಗಿದೆ.<br>• ಆದರೂ ಸಹ, ಸದರಿ ಕರಡು ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ, ಬಾದಿತರಿಂದ ನಿಗದಿತ ಅವಧಿಯಲ್ಲಿ ಸ್ವೀಕರಿಸಿದ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಬೇಕಾಗಿರುತ್ತದೆ. |
| (ಆ) | ಮಾನ್ಯ ಸರ್ವೋಚ್ಚ ನ್ಯಾಯಾಲಯವು ಶ್ರೀ ಬಿ. ಕೆ. ಪವಿತ್ರ ಪ್ರಕರಣ-2ರಲ್ಲಿ ನೀಡಿರುವ ತೀರ್ಪು ಹಾಗೂ ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಅಧಿನಿಯಮ, 2017 ಸೆಕ್ಷನ್ 04 ರಲ್ಲಿ ನಿಯಮವನ್ನು ಉಲ್ಲಂಘಿಸಿ ತಪ್ಪಾಗಿ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ ಅಧಿಕಾರಿ ಮತ್ತು ನೌಕರರ ಮೇಲೆ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 186 ಎಸ್ಆರ್ಎಸ್ 2018, ದಿನಾಂಕ:24.06.2019 ರನ್ವಯ ಕ್ರಮ ಜರುಗಿಸಲಾಗಿದೆಯೇ; | • ಸದರಿ ಕರಡು ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ, ಬಾಧಿತರಿಂದ ನಿಗದಿತ ಅವಧಿಯೊಳಗೆ ಈಗಾಗಲೇ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದ್ದು, ಅವುಗಳನ್ನು ನಿಯಮಾನುಸಾರ ಪರಿಶೀಲಿಸಿ, ಅಗತ್ಯವಿದ್ದಲ್ಲಿ ಸೂಕ್ತ ಬದಲಾವಣೆ ಮಾಡಿ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಬೇಕಾಗಿರುತ್ತದೆ. |
| (ಇ) | ಮುಂಬಡ್ತಿ ಹೊಂದಿದ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಸರ್ಕಾರಿ ನೌಕರರಿಗೆ ಈಗಾಗಲೇ ನೀಡಲಾಗಿರುವ ತತ್ಪರಿಣಾಮ ಜೇಷ್ಠತೆಯನ್ನು ಬದಲಾವಣೆ ಮಾಡಲು ಯಾವ ನಿಯಮಗಳಡಿ ಆಸ್ಪದ ಕಲ್ಪಿಸಲಾಗಿದೆ; | |

| | | |
|---|---|---|
| (ಈ) | ಅರಣ್ಯ ಇಲಾಖೆಯಲ್ಲಿ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಾವಳಿ, 1957ರ ನಿಯಮ 10(1)ರ ಅವಕಾಶದನ್ವಯ ಪ್ರಥಮ ದರ್ಜೆ ಸಹಾಯಕ ವೃಂದದ ಜೇಷ್ಠತಾ ಪಟ್ಟಿಯನ್ನು ಸಂಬಂಧಿಸಿದ ಯುನಿಟ್‌ಗಳಲ್ಲಿ ಸಿದ್ಧಪಡಿಸಿ ಪ್ರಕಟಿಸದೆ ರಾಜ್ಯ ಮಟ್ಟದಲ್ಲಿ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಈ ಕುರಿತು ಸರ್ಕಾರ ಪ್ರತ್ಯೇಕ ಆದೇಶ ಹೊರಡಿಸಿದೆಯೇ; | • ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ Schedule-II ರಲ್ಲಿ ಅರಣ್ಯ ಇಲಾಖೆಯ ವಿವಿಧ ಕಛೇರಿ/ಘಟಕಗಳ ಮುಖ್ಯಸ್ಥರು *[ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯ ಪಡೆ ಮುಖ್ಯಸ್ಥರು) - ಅಂದಿನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು- ಇವರನ್ನು ಸೇರಿದಂತೆ]* ನೇಮಕಾತಿ ಪ್ರಾಧಿಕಾರವಾಗಿರುವುದರಿಂದ ಇಲಾಖೆಯಲ್ಲಿನ ಪ್ರಥಮ ದರ್ಜೆ ಸಹಾಯಕ ವೃಂದದ ಜೇಷ್ಠತಾ ಪಟ್ಟಿಯನ್ನು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯ ಪಡೆ ಮುಖ್ಯಸ್ಥರು) ಇವರ ಮಟ್ಟದಲ್ಲಿ ಪ್ರಕಟಿಸಲಾಗುತ್ತಿದೆ. ಇದು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಾವಳಿ 1957ರ ನಿಯಮ 10(1)ರನ್ವಯವಾಗಿರುತ್ತದೆ.<br>ಪ್ರಸ್ತುತ ಪದ್ಧತಿಯು ಈ ಮೇಲೆ ತಿಳಿಸಿದಂತೆ ನಿಯಮಬದ್ಧವಾಗಿರುವುದರಿಂದ ಜೇಷ್ಠತಾ ಪಟ್ಟಿಯನ್ನು ಬೇರೆ ಪದ್ಧತಿಯಲ್ಲಿ ಪ್ರಕಟಿಸುವ ಪ್ರಸಂಗ ಉದ್ಭವಿಸುವುದಿಲ್ಲ. |
| (ಉ) | ನಿಯಮ 10(1)ರನ್ವಯ ಪ್ರಥಮ ದರ್ಜೆ ಸಹಾಯಕ ವೃಂದದ ಜೇಷ್ಠತಾ ಪಟ್ಟಿಗಳನ್ನು ಸಂಬಂಧಿಸಿದ ಯುನಿಟ್‌ಗಳಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗುವುದೇ; ಹಾಗಿದ್ದಲ್ಲಿ, ಎಷ್ಟು ಸಮಯದಲ್ಲಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು? | |

**ಸಂಖ್ಯೆ: ಅಪಜೀ 05 ಎಫ್‌ಎನ್‌ಬಿ 2024(ಇ)**

**(ಈಶ್ವರ ಬಿ.ಖಂಡ್ರೆ)**
ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು